1 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ನಂಜನಗೂಡು

**ಸಿ.ಸಿ.ಸಂಖ್ಯೆ: 1681/2018**

ಪಿರ್ಯಾದಿ : ಕವಲಂದೆ ಪೋಲಿಸರು

ವಿರುದ್ಧ

ಆರೋಪಿ : ನಿಸಾರ್ ಅಹಮದ್ ಬಿನ್ ಲೇ.ಮಹಮದ್ ಗೌಸ್, ..ವರ್ಷ,
ದೊಡ್ಡಕವಲಂದೆ ಗ್ರಾಮ, ನಂಜನಗೂಡು ತಾಲ್ಲೂಕು

**ದೋಷಾರೋಪಣೆ**

ಶ್ರೀನಾಥ್.ಎ, 1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶನಾದ ನಾನು ಆರೋಪಿತರಾದ ನಿಮ್ಮ ಮೇಲೆ ದೋಷಾರೋಪಿಸುವುದೇನೆಂದರೆ:-

ದಿನಾಂಕ 26.07.2018 ರಂದು ಸಂಜೆ 05.00 ಗಂಟೆ ಸಮಯದಲ್ಲಿ ಕವಲಂದೆ ಪೋಲೀಸ್ ಠಾಣಾ ಸರಹದ್ದಿಗೆ ಸೇರಿದ ದೊಡ್ಡಕವಲಂದೆ ಗ್ರಾಮದ ಸರ್ವೆ ನಂ.2/1 ರ ಜಮೀನಿಗೆ ಸಾಕ್ಷಿ-1 ರವರು ಕಾಂಪೌಂಡ್ ನಿರ್ಮಾಣಮಾಡಿದ್ದು ಆರೋಪಿತರಾದ ನೀವು ಸಾಕ್ಷಿ-1 ರವರ ಬಾಬ್ತು ಸರ್ವೆ ನಂ.2/1 ರ ಜಮೀನಿಗೆ ಅತಿಕ್ರಮ ಪ್ರವೇಶಮಾಡಿದ ಕಾರಣ ಭಾರತ ದಂಡ ಸಂಹಿತೆಯ ಕಲಂ 447 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಎರಡನೆಯದಾಗಿ, ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಸಾಕ್ಷಿ-1 ರವರಿಗೆ ಬೋಳಿ ಮಗನೆ, ಸೂಳೆ ಮಗನೆ ಎಂದು ಅವಾಚ್ಯ ಶಬ್ದಗಳಿಂದ ಬೈದು ಅವಮಾನಮಾಡಿ ಶಾಂತಿಯನ್ನು ಭಂಗಮಾಡಿದ ಕಾರಣ ಭಾರತ ದಂಡ ಸಂಹಿತೆಯ ಕಲಂ 504 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಮೂರನೆಯದಾಗಿ, ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಸಾಕ್ಷಿ-1 ರವರು ಕಟ್ಟಿದ್ದ ಕಾಂಪೌಂಡ್ ಗೋಡೆಯನ್ನು ಬೀಳಿಸಿ ಸಾಕ್ಷಿ-1 ರವರಿಗೆ ಸುಮಾರು ರೂ.2,000/- ಗಳಷ್ಟು ನಷ್ಟವನ್ನುಂಟುಮಾಡಿದ ಕಾರಣ ಭಾರತ ದಂಡ ಸಂಹಿತೆಯ ಕಲಂ 427 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಕೊನೆಯದಾಗಿ, ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಸಾಕ್ಷಿ-1 ರವರನ್ನು ಕೊಲೆ ಮಾಡುವುದಾಗಿ ಕೊಲೆ ಬೆದರಿಕೆ ಹಾಕಿದ ಕಾರಣ ಭಾರತ ದಂಡ

ಸಂಹಿತೆಯ ಕಲಂ 506 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

**ಮೇಲ್ಕಂಡ ಆಪಾದನೆಗೆ ಆರೋಪಿಗಳಾದ ನಿಮ್ಮನ್ನು ನ್ಯಾಯಾಲಯದ ಅಧಿವಿಚಾರಣೆಯನ್ನು ಎದುರಿಸಬೇಕೆಂದು ಆದೇಶಿಸುತ್ತೇನೆ.**

ಸಹಿ/-

**ದಿನಾಂಕಃ 29.03.2021** **1 ನೇ ಹೆ ಸಿ.ಜೆ. ಮತ್ತು ಜೆ.ಎಂ.ಎಫ್.ಸಿ.**

**ಸ್ಥಳ ಃ ನಂಜನಗೂಡು** **ನಂಜನಗೂಡು**

**1 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ,**
**ನಂಜನಗೂಡು**

**ಸಿ.ಸಿ.ಸಂಖ್ಯೆ: 1681/2018**

**ಪಿರ್ಯಾದಿ :** ಕವಲಂದೆ ಪೋಲಿಸರು

**ವಿರುದ್ಧ**

**ಆರೋಪಿ :** ನಿಸಾರ್ ಅಹಮದ್ ಬಿನ್ ಲೇ.ಮಹಮದ್ ಗೌಸ್, ..ವರ್ಷ,
ದೊಡ್ಡಕವಲಂದೆ ಗ್ರಾಮ, ನಂಜನಗೂಡು ತಾಲ್ಲೂಕು

: ಆಪಾದನೆ :

ಪ್ರಶ್ನೆ1 : ಮೇಲ್ಕಂಡ ಎಲ್ಲಾ ಆಪಾದನೆಗಳನ್ನು ಓದಿ ಹೇಳಿದ್ದು ಅರ್ಥವಾಯಿತೇ ?
ಉತ್ತರ :

ಪ್ರಶ್ನೆ2 : ಸದರೀ ಆಪಾದನೆಗಳನ್ನು ಒಪ್ಪಿಕೊಳ್ಳುವೆಯಾ ಅಥವಾ ವಿಚಾರಣೆಯಾಗಬೇಕೋ?
ಉತ್ತರ :

ಮೇಲ್ಕಂಡ ಎಲ್ಲಾ ಆಪಾದನೆಗಳನ್ನು ನನ್ನ ಸಮಕ್ಷಮ ಓದಿ ಹೇಳಿ ಆರೋಪಿತನ ಹೇಳಿಕೆಯನ್ನು ಪಡೆದುಕೊಂಡು ಸತ್ಯವಾಗಿದೆ ಎಂದು ದೃಢೀಕರಿಸಲಾಗಿದೆ.

ಸಹಿ/-

**ದಿನಾಂಕ:29.03.2021** **1 ನೇ ಹೆ ಸಿ.ಜೆ. ಮತ್ತು ಜೆ.ಎಂ.ಎಫ್.ಸಿ.**
**ಸ್ಥಳ : ನಂಜನಗೂಡು** **ನಂಜನಗೂಡು**